ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಆಗಸ್ಟ್-19ರ ಪ್ರವಾಹದಿಂದಾಗಿ ಸೂರು ಕಳೆದುಕೊಂಡ ಸಂತ್ರಸ್ಥರ ಸಮಸ್ಯೆ ಮತ್ತು ಪರಿಹಾರದ ಬಗ್ಗೆ

ಶ್ರೀಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

299 (370) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಳಗಾವಿ ಜಿಲ್ಲೆಯ ವಿವಿಧ ತಾಲ್ಲೂಕುಗಳು ಆಗಸ್ಟ್-19ರ ಭೀಕರ ಪ್ರವಾಹದಿಂದ ತತ್ತರಿಸಿದ್ದು, ಅದರಿಂದ ಮನೆಗಳನ್ನು ಕಳೆದುಕೊಂಡು ಬೀದಿಗೆ ಬಿದ್ದ ಸಾವಿರಾರು ನಿರಾಶ್ರಿತರಿಗೆ ಈವರೆಗೂ ಪರಿಹಾರ ಸಿಗದೆ ಸರ್ಕಾರಿ ಕಛೇರಿಗಳಿಗೆ ಅಲೆದಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಪ್ರವಾಹದಲ್ಲಿ ಮನೆಗಳನ್ನು ಕಳೆದುಕೊಂಡಿರುವ, ಸೂರಿಲ್ಲದ ನಿರಾಶ್ರಿತರಿಗೆ ಮನೆಗಳನ್ನು ನಿರ್ಮಿಸಿಕೊಳ್ಳಲು ಸರ್ಕಾರ ಯಾವಾಗ ಪರಿಹಾರ ಒದಗಿಸಿ, ಅಗತ್ಯ ಕ್ರಮ ಕೈಗೊಳ್ಳುವುದು ;

(ಇ) ಸೂರುಗಳನ್ನು ಕಳೆದುಕೊಂಡ ನಿರಾಶ್ರಿತರು ಜಿಲ್ಲಾಧಿಕಾರಿಗಳ ಕಛೇರಿ ಮುಂದೆ ಧರಣಿ ಕುಳಿತಾಗ ಜಿಲ್ಲಾಧಿಕಾರಿಗಳು ಸಂಬಂಧಿಸಿದ ವಿಭಾಗಾಧಿಕಾರಿಗಳಿಂದ ವರದಿ ತರಿಸಿ, ಪರಿಶೀಲಿಸಿ ಸರ್ಕಾರಕ್ಕೆ ಸಲ್ಲಿಸಿದ ಮನವಿ ಏನಾಯಿತು ;

(ಈ) ಜಿಲ್ಲಾಧಿಕಾರಿಗಳ ವರದಿಯ ಅನುಷ್ಠಾನ ಯಾವ ಹಂತದಲ್ಲಿದೆ ; ಯಾವ ಕಾಲಮಿತಿಯಲ್ಲಿ ನೊಂದ ನಿರಾಶ್ರಿತರಿಗೆ ಸೂರು ಕಟ್ಟಿಕೊಳ್ಳಲು ಪರಿಹಾರ ಒದಗಿಸಲು ಕ್ರಮ ಕೈಗೊಳ್ಳಲಾಗುವುದು? (ವಿವರ ಒದಗಿಸುವುದು)